**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/8/ಸುತ್ತೋಲೆ/2022-23/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು ದಿನಾಂಕ:02.02.2023

## ಸುತ್ತೋಲೆ-2

**ವಿಷಯ:** 2022-23ನೇ ಸಾಲಿಗೆ ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಸಂಖ್ಯೆ:ಕಾಶಿಇ/70/ಸುತ್ತೋಲೆ/2022-23/ವಿ.ವೇ ದಿನಾಂಕ:21.01.2023.

***********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಇಲಾಖಾ ವ್ಯಾಪ್ತಿಯ ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು 2022-23ನೇ ಸಾಲಿನಿಂದ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಅನುಷ್ಠಾನಗೊಳಿಸಲಾಗಿರುವ, ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲು ಈ ಲಿಂಕ್ : https://ssp.postmatric.karnataka.gov.in/2223 Processing/LoginPage.aspx ನ್ನು ಬಳಸಿಕೊಂಡು ವಿವಿಧ ವಿದ್ಯಾರ್ಥಿ ವೇತನ ಹಾಗೂ ಶುಲ್ಕ ಮರುಪಾವತಿ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

**ಸೂಚನೆ:**

1. **ಉಲ್ಲೇಖಿತ ಪತ್ರದಲ್ಲಿ ಕೋರಿರುವ ಮಾಹಿತಿಯನ್ನು ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ನೇರವಾಗಿ ಕೇಂದ್ರ ಕಛೇರಿಗೆ ಸಲ್ಲಿಸದೇ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಸಲ್ಲಿಸುವುದು.**
2. **ವಿದ್ಯಾರ್ಥಿವೇತನ ನವೀಕರಣದ ಸಲುವಾಗಿ ಕಾಲೇಜುಗಳು ಈಗಾಗಲೇ ಕೇಂದ್ರ ಕಛೇರಿಗೆ ಸಲ್ಲಿಸಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಯಾವುದೇ ಕಾರಣಕ್ಕೂ ಮಂಜೂರಾತಿಗೆ ಪರಿಗಣಿಸಲಾಗುವುದಿಲ್ಲ.**
3. **ವಿದ್ಯಾರ್ಥಿ ವೇತನ ಮತ್ತು ಶುಲ್ಕ ಮರುಪಾವತಿ ಮಂಜೂರಾತಿಗೆ ಸಂಬಂಧಪಟ್ಟಂತೆ ಎಸ್.ಎಸ್.ಪಿ ಪೋರ್ಟಲ್ (State Scholarship Portal) ಮೂಲಕ ಅರ್ಜಿ ಸಲ್ಲಿಸುವಂತೆ ವಿದ್ಯಾರ್ಥಿಗಳಿಗೆ ಸೂಚಿಸುವುದು.**
4. **ವಿದ್ಯಾರ್ಥಿಗಳು State Scholarship Portal ನಲ್ಲಿ ನೊಂದಣಿ ಮಾಡಿದ ನಂತರ ವಿದ್ಯಾರ್ಥಿಗಳಿಂದ ಪಡೆದ ಎಸ್.ಎಸ್.ಪಿ ಐಡಿ ಸಂಖ್ಯೆಯನ್ನು ಪ್ರಾದೇಶಿಕ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸುವುದು.**

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ

1) ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಚನಾ ಫಲಕದಲ್ಲಿ ಸುತ್ತೋಲೆಯಲ್ಲಿರುವ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು
2) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ
3) ಕಛೇರಿ ಪ್ರತಿ.